**ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯಃ ಬೇಲೂರು**

**ಃಸಿಸಿ ಸಂಖ್ಯೆಃ 357 ಃ 2019 ಃ**

ಫಿರ್ಯಾದುದಾರರು : ಸರ್ಕಾರದ ಪರವಾಗಿ
ಅಬಕಾರಿ ಪೋಲೀಸ್, ಬೇಲೂರು

ವಿರುದ್ಧ

ಆರೋಪಿಃಗಳು :

ಮಧು ಬಿನ್ ಲೇಟ್ ಹೂವೇಗೌಡ ,
45 ವರ್ಷ,
ಎ.ಸಂತೆ ಬೀದಿ, ಹಳೇಬೀಡು ಗ್ರಾಮ,
ಬೇಲೂರು ತಾಲ್ಲೂಕು.

- - -

**ಃದೋಷಾರೋಪಣೆಃ**

ಶ್ರೀ ಪ್ರಸನ್ನ ಕುಮಾರ್ ಸಿ. ಬಿ.ಎ.ಎಲ್., ಎಲ್‌ಎಲ್.ಬಿ., ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ, ಬೇಲೂರು ಆದ ನಾನು ಆರೋಪಿತರಾದ ನಿಮ್ಮನ್ನು ಈ ಕೆಳಕಂಡಂತೆ ದೋಷಾರೋಪಣೆಗೆ ಗುರಿಪಡಿಸುತ್ತಿದ್ದೇನೆಃ-

1) ದಿನಾಂಕಃ 16-03-2019 ರಂದು ಬೇಲೂರು ತಾಲ್ಲೂಕು, ಹಳೇಬೀಡು ಗ್ರಾಮದಲ್ಲಿರುವ ಮಲ್ನಾಡ್ ಹೋಟೆಲ್ ನಲ್ಲಿ ಆರೋಪಿತರಾದ ನೀವು 23.580 ಲೀಟರ್ ನಷ್ಟು ಮದ್ಯವನ್ನು ಕಾನೂನು ಬಾಹಿರವಾಗಿ ಯಾವುದೇ ಪರವಾನಗಿ ಇಲ್ಲದೇ, ನಿಮ್ಮ ಸ್ವಾಧೀನದಲ್ಲಿ ಇಟ್ಟುಕೊಂಡು, ಕರ್ನಾಟಕ ಅಬಕಾರಿ ಕಾಯ್ದೆ ಕಲಂ. 32(1) ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ?

2) ಎರಡನೇಯದಾಗಿ ಮೇಲ್ಕಂಡ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುವ ಸಲುವಾಗಿ 23.580 ಲೀಟರ್ ನಷ್ಟು ಮದ್ಯವನ್ನು ಅಕ್ರಮವಾಗಿ ಸ್ವಾಧೀನ ಹೊಂದಲು ನಿಮ್ಮ ಹೊಟೆಲ್ ನ್ನು ಅನುವು ಮಾಡಿಕೊಂಡಿದ್ದು, ಅದರನ್ವಯ ಕರ್ನಾಟಕ ಅಬಕಾರಿ ಕಾಯ್ದೆ ಕಲಂ. 38(ಎ) ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ?

3) ಮೂರನೇಯದಾಗಿ, ಮೇಲ್ಕಂಡ ಅದೇ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ ಆರೋಪಿತರಾದ ನೀವು ನಿಮ್ಮ ಮಲ್ನಾಡ್ ಹೊಟೆಲ್ ನಲ್ಲಿ ಅಕ್ರಮವಾಗಿ ಮಾನವ ಜೀವಕ್ಕೆ ಹಾನಿಕರವಾದ ಕಲಬೆರಿಕೆ ಪಾನೀಯವಾದ ಸುಮಾರು 23.580 ಲೀಟರ್ ನಷ್ಟು ಮದ್ಯವನ್ನು ಅಕ್ರಮವಾಗಿ ಸ್ವಾಧೀನ ಹೊಂದಿದ್ದು ಕಾರಣ ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂಃ 272 ರಡಿಯಲ್ಲಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ?

ಮೇಲ್ಕಂಡ ಆರೋಪಿತರಿಗೆ ದೋಷಾರೋಪಣೆಯ ಸಾರಾಂಶವನ್ನು ಅವರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಅವರು ನೀಡಿದ ಉತ್ತರವನ್ನು ಯಥಾವತ್ತಾಗಿ ದಾಖಲಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಧೃಡೀಕರಿಸುತ್ತೇನೆ.

ಸ್ಥಳಃ ಬೇಲೂರು
ದಿನಾಂಕಃ 24-06-2023

(ಪ್ರಸನ್ನ ಕುಮಾರ್ ಸಿ.)
ಸಿವಿಲ್ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ಬೇಲೂರು

**ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯಃ ಬೇಲೂರು**

**ಃಸಿಸಿ ಸಂಖ್ಯೆಃ 357 ಃ 2019 ಃ**

| | | |
|---|---|---|
| ಆರೋಪಿಯ ಹೆಸರು | ಃ | ಮಧು |
| ತಂದೆಃಗಂಡನ ಹೆಸರು | ಃ | ಬಿನ್ ಲೇಟ್ ಹೂವೇಗೌಡ |
| ವಯ್ಯಸ್ಸು | ಃ | 45 ವರ್ಷ, |
| ವಾಸ ಸ್ಥಳ | ಃ | ಎ.ಸಂತೆ ಬೀದಿ, ಹಳೇಬೀಡು ಗ್ರಾಮ, ಬೇಲೂರು ತಾಲ್ಲೂಕು. |

ಪ್ರಶ್ನೆಃ1 ನಾನು ತಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?
ಉತ್ತರಃ

ಪ್ರಶ್ನೆಃ2 ಸದರಿ ಆರೋಪಣೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?
ಉತ್ತರಃ

ಮೇಲ್ಕಂಡ ಆರೋಪಿಯ ಪರೀಕ್ಷೆಯನ್ನು ನನ್ನ ಸಮಕ್ಷಮ ಮತ್ತು ವೈಯ್ಯಕ್ತಿಕ ಹೇಳಿಕೆ ಮೇಲೆ ಮಾಡಿಕೊಂಡಿದ್ದು ಮತ್ತು ದಾಖಲಾತಿಯ ಸಂಪೂರ್ಣ ಮತ್ತು ಸತ್ಯವಾದ ಆರೋಪಿಯ ಹೇಳಿಕೆಯನ್ನು ಒಳಗೊಂಡಿರುತ್ತದೆ ಎಂದು ಈ ಮೂಲಕ ಧೃಡೀಕರಿಸುತ್ತೇನೆ.

ಸ್ಥಳಃ ಬೇಲೂರು
ದಿನಾಂಕಃ24-06-2023

(ಪ್ರಸನ್ನ ಕುಮಾರ್ ಸಿ.)
ಸಿವಿಲ್ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ಬೇಲೂರು